ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು-65

ರಾಗುಟ್ಟಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ:1.07.16

ಈ ವಾರದ ಮುನ್ಸೂಚನೆ (2.7.16 to 6.7.16 ವರೆಗೆ)

ನಿಯತಾಂಕಗಳು	2.07.16	3.07.16	4.07.16	5.07.16	6.07.16
ಮಳೆ (ಮಿ ಮಿ)	2	2	3	3	4
ಗರಿಷ್ಠ ಉಷ್ಣಾಂಶ(ಡಿ.ಸೆ.)	31	30	31	30	30
ಕನಿಷ್ಠ ಉಷ್ಣಾಂಶ (ಡಿ.ಸೆ.)	20	21	21	21	21
ಮೋಡ (ಪ್ರಮಾಣ)	5	7	8	8	8
ಅರ್ದ್ರತೆ ೭.೨೦ ಬೆ (ಶೇ)	71	73	72	72	70
ಅರ್ದ್ರತೆ ೨.೨೦ ಮ (ಶೇ)	57	53	52	53	56
ಗಾಳಿಯ ವೇಗ (ಕಿ.ಮಿ/ಗಂಟೆಗೆ)	8	10	6	4	10
ಗಾಳಿಯ ದಿಕ್ಕು (ಡಿಗ್ರಿ)	230	240	230	250	230

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ರಾಗುಟ್ಟಹಳ್ಳಿ ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಮೋಡ ಕವಿದ ವಾತಾವರಣವಿದ್ದು ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶವು 30–31°C ಮತ್ತು ಕನಿಷ್ಠ 20-21°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 70-73 % ಇದ್ದು, ಮಧ್ಯಾಹ್ನ 52-57% ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 4-10 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ ಬಿತ್ತನೆಗೆ ಮೊದಲು ಸಾವಯವ ಗೊಬ್ಬರವನ್ನು ಭೂಮಿಗೆ ಸೇರಿಸುವುದು ಹಾಗು ಭೂಮಿಯನ್ನು ಮಟ್ಟಮಾಡಿ ಬಿತ್ತನೆಗೆ ಹದಮಾಡಿಕೊಳ್ಳುವುದು.
- ✓ ಖುಷ್ಕಿ ಜಮೀನಿನಲ್ಲಿ ಬದುಗಳನ್ನು ಭದ್ರಗೊಳಿಸಬೇಕು, ಸೂಕ್ತ ಬಸಿಗಾಲುವೆಗಳನ್ನು ನಿರ್ಮಿಸಿಕೊಂಡು ನೀರು ನಿಲ್ಲದಂತೆ ನೋಡಿಕೊಳ್ಳಿ
- ✓ ಬಿತ್ತನೆಗೆ ಬೇಕಾದ ಉತ್ತಮ ಗುಣಮಟ್ಟದ ಬೀಜಗಳನ್ನು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ಖರೀದಿಸಲು ಸೂಚಿಸಲಾಗಿದೆ
- ✓ ಬಿತ್ತನೆಗೆ ಬೇಕಾಗುವ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ.
- ✓ ಮುಂಗಾರು ಬೆಳೆಗಳಾಗಿ ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4ಮತ್ತು 5, ಹರಳು: ಡಿ.ಸಿ.ಎಸ್–9 (ಜ್ಯೊತಿ), ಡಿ.ಸಿ.ಎಚ್–177 ಮತ್ತು 32

  ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ.

  ರಾಗಿ: ಇಂಡಾಫ್–9, ಎಳ್ಳು : ನವಿಲೆ–1, ಟಿ–7, ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1,ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 ,

  ಉದ್ದು: ಕರಗಾವ್–3, ಟಿ–9, ರಶ್ಮಿ, ಶೇಂಗಾ : ಜೆ ಎಲ್–24, ಟಿ.ಎಮ್.ವಿ–2
- ✓ ದ್ವಿದಳ ಧಾನ್ಯ ಬೆಳೆಗಳನ್ನು ಬಿತ್ತುವ ಮುನ್ನ ಜೈವಿಕ ಗೊಬ್ಬರಗಳಾದ ರೈಜೋಬಿಯಮ್ ನಿಂದ ಬೀಜೋಪಚಾರ ಮಾಡಬೇಕು
- ✓ **ಜುಲೈ** ಮೂರನೇ ವಾರದೊಳಗೆ ನೆಲಗಡಲೆ, ತೊಗರಿ+ನೆಲಗಡಲೆ (4:1 ಅಥವಾ 8:2 ಸಾಲುಗಳ ಪ್ರಮಾಣದಲ್ಲಿ), ಮಧ್ಯಮವಾಧಿ ತಳಿ ರಾಗಿ, ಹಾರಕ, ಸಾಮೆ, ಬರಗು, ಹರಳು ಬಿತ್ತನೆ ಮಾಡುವುದು ಸೂಕ್ತ
- ✓ ವೇಗವಾದ ಗಾಳಿ ಇರುವುದರಿಂದ ಟೊಮ್ಯಾಟೊ ಹಾಗೂ ಇನ್ನಿತರೆ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡುವುದು ಅತಿ ಮುಖ್ಯ.

ಸಸ್ಯ ಸಂರಕ್ಷಣೆ:

- ✓ ಮುಂದಿನ ಐದು ದಿನಗಳು ಮಳೆ ಬರುವ ಸಂಭವವಿರುವುದರಿಂದ ಔಷಧಿ ಸಿಂಪರಣೆ ಮಾಡದಿರಿಲು ಸೂಚಿಸಲಾಗಿದೆ.

ನೋಡಲ್ ಅಧಿಕಾರಿ:

ಕೃಷಿ ಹವಾಮಾನ ವಿಭಾಗ

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು